# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ. ನಾಗರಾಜು ಇವರು ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ

**ಸೂಚನೆ:**

ಕರ್ನಾಟಕ ರಾಜ್ಯದಲ್ಲಿ ಹಲವು ಸಮುದಾಯಗಳಿಗೆ ಸರ್ಕಾರದಿಂದ ಲಭಿಸುವ ಸವಲತ್ತುಗಳು ಮತ್ತು ಅನುದಾನಗಳನ್ನು ಪಡೆಯಲು ಪ್ರತ್ಯೇಕ ನಿಗಮಗಳನ್ನು ರಚಿಸಿದ್ದು, ಅತೀ ಹಿಂದುಳಿದ ಹಾಗೂ ಸಾಮಾಜಿಕವಾಗಿ-ಶೈಕ್ಷಣಿಕವಾಗಿ-ಆರ್ಥಿಕವಾಗಿ ಹಿಂದುಳಿದ ಗೊಲ್ಲ(ಯಾದವ್) ಸಮುದಾಯಕ್ಕೆ ಇಲ್ಲಿಯವರೆಗೆ ಪ್ರತ್ಯೇಕ ನಿಗಮ ಸ್ಥಾಪಿಸಿರುವುದಿಲ್ಲ. ಈ ಗೊಲ್ಲ ಸಮುದಾಯದ ನಾಗರಿಕರು ಸಾಮಾಜಿಕವಾಗಿ-ಶೈಕ್ಷಣಿಕವಾಗಿ-ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಹಿಂದುಳಿದಿದ್ದು, ಸರ್ಕಾರದಿಂದ ಲಭ್ಯವಾಗುವ ಬಹುತೇಕ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿರುತ್ತಾರೆ. ಅದ್ದರಿಂದ ಗೊಲ್ಲ ಸಮುದಾಯದ ಜನರಿಗೆ ಮೂಲಭೂತ ಸೌಕರ್ಯಗಳನ್ನು ಪಡೆದುಕೊಳ್ಳಲು ಹಾಗೂ ಗೊಲ್ಲ ಸಮುದಾಯದ ಅಭಿವೃದ್ಧಿಗಾಗಿ ಅನುದಾನವನ್ನು ಮೀಸಲಿಟ್ಟು ರಾಜ್ಯದಲ್ಲಿ ಗೊಲ್ಲ ಸಮುದಾಯಕ್ಕೆ ಪ್ರತ್ಯೇಕ ಯಾದವ (ಗೊಲ್ಲ) ನಿಗಮ ಸ್ಥಾಪಿಸುವ ಕುರಿತು, ಚರ್ಚಿಸಲು ಸನ್ಮಾನ್ಯ ಮುಖ್ಯಮಂತ್ರಿರವರು/ ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ವಿವಿಧ ಸಮುದಾಯಗಳಿಗೆ ಸೇರಿದ 17 ನಿಗಮಗಳು ಕಾರ್ಯನಿರ್ವಹಿಸುತ್ತಿವೆ. ಅತೀ ಹಿಂದುಳಿದ ಹಾಗೂ ಸಾಮಾಜಿಕವಾಗಿ ಶೈಕ್ಷಣಿಕವಾಗಿ- ಆರ್ಥಿಕವಾಗಿ ಹಿಂದುಳಿದ ಸಮುದಾಯಗಳ ಅಭಿವೃದ್ಧಿಗಾಗಿ ಗೊಲ್ಲ (ಯಾದವ) ಸಮುದಾಯವೂ ಸೇರಿದಂತೆ 46 ಅಲೆಮಾರಿ ಅರೆ ಅಲೆಮಾರಿ ಸಮುದಾಯಗಳಿಗೆ ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮವನ್ನು 2019-20ನೇ ಸಾಲಿನಲ್ಲಿ ಸ್ಥಾಪಿಸಲಾಗಿದೆ. ಈ ನಿಗಮದಿಂದ ಶಿಕ್ಷಣ ಮತ್ತು ಉದ್ಯೋಗದ ಮೀಸಲಾತಿಗಾಗಿ ಗೊಲ್ಲ ಸಮುದಾಯವೂ ಸೇರಿದಂತೆ, ಒಟ್ಟು 46 ಸಮುದಾಯಗಳು ಪ್ರವರ್ಗ -1 ರಲ್ಲಿ ಸೌಲಭ್ಯವನ್ನು ಪಡೆಯುತ್ತಿದ್ದಾರೆ. ಈ ನಿಗಮದ ವತಿಯಿಂದ ಸದರಿ ಸಮುದಾಯಗಳನ್ನು ಸಮಾಜದ ಮುಖ್ಯವಾಹಿನಿಗೆ ತರಲು ಪ್ರಮುಖವಾಗಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಶೈಕ್ಷಣಿಕ ಸಾಲ ಸೌಲಭ್ಯ ಯೋಜನೆ, ಗಂಗಾಕಲ್ಯಾಣ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ ಮತ್ತು ಇತರೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಮುಂದುವರೆದು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಲೆಮಾರಿ ಅರೆ ಅಲೆಮಾರಿ ಕೋಶದ ಮುಖಾಂತರ ಗೊಲ್ಲ ಸಮುದಾಯವೂ ಸೇರಿದಂತೆ ಒಟ್ಟು 46 ಅಲೆಮಾರಿ ಅರೆ ಅಲೆಮಾರಿ ಬುಡಕಟ್ಟು ಜನರಿಗಾಗಿ ವಸತಿ ಯೋಜನೆ, ವಿದ್ಯಾರ್ಥಿ ವೇತನ, ಆಶ್ರಮ ಶಾಲೆ ಹಾಗೂ ವಿದ್ಯಾರ್ಥಿ ನಿಲಯಗಳನ್ನು ಸಹ ಪ್ರಾರಂಭಿಸಲಾಗಿದೆ.

...2

ಹೀಗೆ ಗೊಲ್ಲ ಸಮುದಾಯವೂ ಸೇರಿದಂತೆ ಅಲೆಮಾರಿ ಅರೆ ಅಲೆಮಾರಿ ಬುಡಕಟ್ಟು ಜನರಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಪ್ರತ್ಯೇಕವಾಗಿ ಗೊಲ್ಲ ಸಮುದಾಯಕ್ಕಾಗಿ ನಿಗಮವನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

**ಸಂಖ್ಯೆ: ಹಿಂವಕ 259 ಬಿಸಿಎ 2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು